ಮಂಡನೆ ಅನುಮತಿ ಕೋರಿಕೆ

ಶ್ರೀ ಸಿದ್ದರಾಮಯ್ಯ(ಹಣಕಾಸು ಮತ್ತು ಯೋಜನಾ ಸಚಿವರು):- ಮಾನ್ಯ ಅಧ್ಯಕ್ಷರೇ, 1995ರ ಧನ ವಿನಿಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ, 1995ರ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಸಿದ್ದರಾಮಯ್ಯ (ಹಣಕಾಸು ಹಾಗೂ ಯೋಜನಾ ಸಚಿವರು):- ಮಾನ್ಯ ಅಧ್ಯಕ್ಷರೆ, 1995ರ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

. ಅಧ್ಯಕ್ಷರು :- ವಿಧೇಯಕವನ್ನು ಮಂಡಿಸಲಾಗಿದೆ.

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ಧನ ವಿನಿಯೋಗ ವಿಧೇಯಕ 1995

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿದ್ದರಾಮಯ್ಯ (ಹಣಕಾಸು ಮತ್ತು ಯೋಜನಾ ಮಂತ್ರಿಗಳು):- ಮಾನ್ಯ ಅಧ್ಯಕ್ಷರೆ, 1995ರ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ 1995ರ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸುವುದು